ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಕರ್ನಾಟಕ ವಿಧಾನ ಸಭೆ

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡ ಪ್ರಭ ದಿನಾಂಕ : DATE : 30/05/2019

# ನಿಗಮ ಮಂಡಳಿಗೆ ತ್ಯಾಗಪತ್ರ ನೀಡಿದ್ದೇನೆ: ಶಾಸಕ ಸುಬ್ಬಾರೆಡ್ಡಿ



ಚಿಕ್ಕಬಳ್ಳಾಪುರ: 'ಕೆಲಸಕ್ಕೆ ಬಾರದ ನಿಗಮ ಮಂಡಳಿ ತಮಗೆ ಬೇಡ. ಪಕ್ಷದಲ್ಲಿ ಮತ್ತೊಬ್ಬರಿಗೆ ನೀಡಿ ಎಂದು ಕೆಪಿಸಿಸಿ ಅಧ್ಯಕ್ಷ ದಿನೇಶ್ ಗೂಂಡೂರಾವ್ ಮತ್ತು ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರಿಗೆ ರಾಜೀನಾಮೆ ಪತ್ರ ನೀಡಿದ್ದೇನೆ' ಎಂದು ಬಾಗೇಪಲ್ಲಿ ಕಾಂಗ್ರೆಸ್ ಶಾಸಕ ಎಸ್.ಎನ್. ಸುಬ್ಬಾರೆಡ್ಡಿ ತಿಳಿಸಿದ್ದಾರೆ. ನಿಗಮ ಮಂಡಳಿ ಅಧ್ಯಕ್ಷ ಸ್ಥಾನ ನೀಡುವಂತೆ ಈ ಹಿಂದೆ ಬೇಡಿಕೆ ಇಟ್ಟಿದ್ದು ನಿಜ. ಆದರೆ, ರೇಷ್ಮೆ ಕೈಗಾರಿಕಾ ಅಭಿವೃದ್ಧಿ ನಿಗಮ ಬೇಡ ಎಂದು ವರಿಷ್ಠರಿಗೆ ಹೇಳಿದ್ದೆ. ಆದರೂ ಬಲವಂತವಾಗಿ ನೀಡಿದರು. ಕೆಲಸಕ್ಕೆ ಬಾರದ ನಿಗಮ ಮಂಡಳಿ ನನಗೆ ಬೇಡ. ಪಕ್ಷದಲ್ಲಿ ಮತ್ತೊಬ್ಬರಿಗೆ ನೀಡಿ ಎಂದು ರಾಜೀನಾಮೆ ನೀಡಿದ್ದೇನೆ. ಜೊತೆಗೆ ಸಣ್ಣ ಕೈಗಾರಿಕಾ ಇಲಾಖೆ ಸಚಿವರಿಗೂ ತಮಗೂ ಹೊಂದಾಣಿಕೆ ಕಷ್ಟಸಾಧ್ಯ. ಹಾಗಾಗಿ ನಿಗಮ ಮಂಡಳಿಯೇ ಬೇಡ ಎಂದು ತಿಳಿಸಿದ್ದೇನೆ ಎಂದು ಹೇಳಿದರು.